ಕರ್ನಾಟಕ ಸರ್ಕಾರ
<u>ತಾಂತ್ರಿಕ ಶಿಕ್ಷಣ ಇಲಾಖೆ</u>

ಸಂಖ್ಯೆ: ಬಿಟಿಇ/01/ಇಸಿಎಸ್(2)/2016

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01,
ದಿನಾಂಕ: 02-07-2016

## ಸುತ್ತೋಲೆ

ವಿಷಯ: 2016 ರ ಏಪ್ರಿಲ್/ಮೇ ಸೆಮಿಸ್ಟರ್ ಡಿಪ್ಲೋಮಾ ಪರೀಕ್ಷೆಯ ಅಂತಿಮ ವರ್ಷದ DCET 2016 ಪರೀಕ್ಷೆ ತೆಗೆದುಕೊಳ್ಳಬಹುದಾದ ವಿದ್ಯಾರ್ಥಿಗಳು ಉತ್ತರ ಪತ್ರಿಕೆಗಳ ಫೋಟೋ ಪ್ರತಿ ಪಡೆದ ನಂತರ ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸುವ ಕುರಿತು.

ಉಲ್ಲೇಖ: 1. ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/01/ಇಸಿಎಸ್(2)/2016 ದಿನಾಂಕ: 17-06-2016
2. ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/01/ಇಸಿಎಸ್(2)/2016 ದಿನಾಂಕ: 24-06-2016

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2016 ರ ಏಪ್ರಿಲ್/ಮೇ ತಿಂಗಳಿನಲ್ಲಿ ನಡೆದ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗೆ ಹಾಜರಿದ್ದು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುವ DCET 2016 ಪರೀಕ್ಷೆ ತೆಗೆದುಕೊಳ್ಳಬಹುದಾದ ಸಂಭವನೀಯ ವಿದ್ಯಾರ್ಥಿಗಳು ಮತ್ತು 2ನೇ ಬಿ.ಕಾಂ/ ಬಿಬಿಎಂ/ ಬಿಎಸ್‌ಸಿ ಫ್ಯಾಷನ್ ಟೆಕ್ನಾಲಜಿ ಹಾಗೂ ಇನ್ನಿತರೆ ಕೋರ್ಸ್‌ಗಳ ಉನ್ನತ ವ್ಯಾಸಂಗಕ್ಕಾಗಿ ಪ್ರವೇಶ ಪಡೆಯಲು ಅರ್ಹತೆ ಹೊಂದಿರುವ ಎಲ್ಲಾ ಅಂತಿಮ ವರ್ಷದ ವಿದ್ಯಾರ್ಥಿಗಳು ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ಪಡೆದ ನಂತರ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಹಾಗೂ ಸದರಿ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಲು <u>ದಿನಾಂಕ 04-07-2016 ರಂದು ಸಂಜೆ 5-00 ಗಂಟೆಯವರೆಗೆ</u> ಕಾಲಾವಕಾಶ ನಿಗದಿಪಡಿಸಲಾಗಿದೆ. ಈ ವಿಷಯವನ್ನು ಎಲ್ಲಾ ವಿದ್ಯಾರ್ಥಿಗಳ ಗಮನಕ್ಕೆ ತಪ್ಪದೇ ತರಲು ಹಾಗೂ ಸೂಕ್ತ ಕ್ರಮ ಕೈಗೊಳ್ಳಲು ಮೂಲಕ ತಿಳಿಸಲಾಗಿದೆ.

ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡದ ಮರುಮೌಲ್ಯಮಾಪನದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಮತ್ತೊಮ್ಮೆ ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ – ಮುಂದಿನ ಕ್ರಮಕ್ಕಾಗಿ

ಪ್ರತಿ:

1. ಇ – ಗವರ್ನೆನ್ಸ್ ವಿಭಾಗಕ್ಕೆ- ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2. ಗಣಕ ಕೇಂದ್ರಕ್ಕೆ- ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು
3. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂ.ಶಿ.ನಿ.